**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ</u>**

**<u>ಸಿ.ಸಿ.ನಂಃ 1247/2023</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**<u>ಆರೋಪಿತರು :</u>**

1. ಶ್ರೀ ರಾಜಪ್ಪ,
ಬಿನ್ ಶ್ರೀ ರಂಗಪ್ಪ,
45 ವರ್ಷಗಳು,

2. ಶ್ರೀ ರಂಗಸ್ವಾಮಿ,
ಬಿನ್ ರಾಜಪ್ಪ,
25 ವರ್ಷ,

3. ಶ್ರೀ ರಾಕೇಶ,
ಬಿನ್ ಶ್ರೀ ರಾಜಪ್ಪ,
24 ವರ್ಷ,

4. ಶ್ರೀಮತಿ ಪ್ರೇಮ,
ಕೋಂ ಶ್ರೀ ರಾಜಪ್ಪ,
43 ವರ್ಷ,

ಎಲ್ಲರ ವಾಸಃ ಕೊರಟಿಕೆರೆ ಗ್ರಾಮ,
ಅಜ್ಜಂಪುರ ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 05.09.2021 ರಂದು ಬೆಳಿಗ್ಗೆ 7.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಕೊರಟಕೆರೆ ಗ್ರಾಮದ ಅಂಬೇಡ್ಕರ್ ಸಮುದಾಯ ಭವನದ 1 ರಿಂದ 4 ನೇ ಆರೋಪಿತರ ಮನೆಯ ಮುಂದಿನ ರಸ್ತೆಯಲ್ಲಿ ಚಾಸಾ-2/ ಶ್ರೀಮತಿ ಪಾರ್ವತಮ್ಮ ರವರು ಸದರಿ ರಸ್ತೆಯಲ್ಲಿ ಚರಂಡಿಗೆ ಗ್ರಾಮ ಪಂಚಾಯತಿಯಿಂದ ಬಾಕ್ಸ್ ಚರಂಡಿ ನಿರ್ಮಿಸಲು ಅನುಮೋದನೆ ಆಗಿದೆ, ಬಾಕ್ಸ್ ಚರಂಡಿ ನಿರ್ಮಿಸುತ್ತಾರೆ ನಿಮ್ಮ ಕಲ್ಲು ಮತ್ತು ಮಣ್ಣು ಗುಂಡಿಯನ್ನು ತೆಗೆಯುವಂತೆ ನಿಮ್ಮಲ್ಲಿ 1 ನೇ ಆರೋಪಿಗೆ ತಿಳಿಸಿದಾಗ, 1 ರಿಂದ 4 ನೇ ಆರೋಪಿತರಾದ ನೀವು ಅಪರಾಧವನ್ನು ಮಾಡುವ

ಸಮಾನ ಉದ್ದೇಶದಿಂದ ಚಾಸಾ-2 ರವರಿಗೆ ಹೋಗೆ ಸೂಳೆಮುಂಡೆ  ನೀನ್ ಯಾವಳು ಹೇಳೋದಕ್ಕೆ, ನಮ್ಮ ಇಷ್ಟ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಡೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ ಪುನಃ ಮೇಲಿನ ದಿನಾಂಕ 05.09.2021 ರಂದು ಬೆಳಿಗ್ಗೆ 10.30 ಗಂಟೆಗೆ ಚಾಸಾ-1/ ಶ್ರೀ ರಂಗಪ್ಪ ರವರು ಮನೆಯ ಮುಂದಿನ ರಸ್ತೆಯಲ್ಲಿ ಅಂಬೇಡ್ಕರ್ ಸಮುದಾಯ ಭವನದ ಕಡೆಗೆ ಹೋಗುತ್ತಿರುವಾಗ 1 ರಿಂದ 4 ನೇ ಆರೋಪಿತರಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಚಾಸಾ-1 ರವರನ್ನು ಅಕ್ರಮವಾಗಿ ಅಡ್ಡಗಟ್ಟಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರಂತೆ ದಂಡೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 4 ನೇ ಆರೋಪಿಗಳಾದ ನೀವು ಚಾಸಾ-1 ರವರಿಗೆ ಏನೋ ಸೂಳೆಮಗನೆ ಎಲೆಕ್ಷನ್ ಅಲ್ಲಿ ಹೆಂಡತಿಯನ್ನು ಗೆಲ್ಲಿಸಿದ್ದೇನೆ ಎಂದು ಮೆರೆಯುತ್ತಿದ್ದೀಯಾ ಅಂತ ಹೇಳಿ ನಿಮಗೆ ಇಲ್ಲಿ ಯಾವ ಕೆಲಸವನ್ನು ಮಾಡಲಿಕ್ಕೆ ಬಿಡುವುದಿಲ್ಲ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಡೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ಚಾಸಾ-1 ರವರು ನಾನು ಗ್ರಾಮ ಪಂಚಾಯತಿಯಿಂದ ಬಾಕ್ಸ್ ಚರಂಡಿ ನಿರ್ಮಾಣಕ್ಕೆ ಹಣ ಬಿಡುಗಡೆಯಾಗಿದೆ ಯಾಕೆ ಕೆಲಸ ಮಾಡಲು ಅಡ್ಡ ಮಾಡುತ್ತೀರಿ ಅಂತ ಹೇಳಿದ್ದಕ್ಕೆ ಹಳೆ ದ್ವೇಷದಿಂದ ನಿಮ್ಮಲ್ಲಿ 1 ರಿಂದ 3 ನೇ ಆರೋಪಿತರು ಚಾಸಾ-1 ರವರ ಕುತ್ತಿಗೆ ಪಟ್ಟಿ ಹಿಡಿದು ಎಳೆದಾಡಿ  ಚಾಸಾ-1 ರವರ ಎದೆಗೆ

ಕಾಲಿನಿಂದ ಹೊಡೆದಿರುತ್ತೀರಿ, ನಿಮ್ಮಲ್ಲಿ 1 ಮತ್ತು 3 ನೇ ಆರೋಪಿತರು ಚಾಸಾ-1 ರವರ ಕುತ್ತಿಗೆ ಕಾಲನ್ನು ಇಟ್ಟಿರುತ್ತೀರಿ ಹಾಗೂ ನಿಮ್ಮಲ್ಲಿ 1 ರಿಂದ 4 ನೇ ಆರೋಪಿತರು ಕಾಲಿನಿಂದ ಕೈಯಿಂದ ಚಾಸಾ-2 ರವರ ಎದೆಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಐದನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 4 ನೇ ಆರೋಪಿತರಾದ ನೀವು ಚಾಸಾ-2 ರವರ ಮಾನಕ್ಕೆ ಭಂಗ ಉಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 2 ನೇ ಆರೋಪಿ ಚಾಸಾ-1 ರವರ ಎಡಗಾಲಿಗೆ ಮತ್ತು ಎಡಗೈಗೆ ದೊಣ್ಣೆಯಿಂದ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ರಿಂದ 4 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರ:1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಆರೋಪಿ 4: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1: Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

ಆರೋಪಿ 4: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 28.11.2024

ಸಹಿ/-

(ರಾಹುಲ್ ಶೆಟ್ಟಿಗಾರ್)

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ

ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿತರ ಸಹಿಃ